ವ್ಯವಹಾರ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಆಲೂರು.

**ಸಿ.ಸಿ.ಸಂಖ್ಯೆ: 287/18**

| | | |
|---|---|---|
| ಸಾಕ್ಷಿದಾರರ ಹೆಸರು | ಚೈತ್ರ ಉಃ ಚಿತ್ರ | ಸಿ.ಡಬ್ಲ್ಯೂಃ 2 |
| ಗಂಡನ / ತಂದೆ ಹೆಸರು | ಮೋಹನ್ | ಪಿ.ಡಬ್ಲ್ಯೂಃ 2 |
| ವಯಸ್ಸು | 30 ವರ್ಷ | |
| ಉದ್ಯೋಗ | ಗೃಹಿಣಿ | |
| ವಾಸಸ್ಥಳ | ಹಸಗನೂರು | |

ಪ್ರಮಾಣ ವಚನ ಬೋಧಿಸಲಾಯಿತು.

ದಿಃ 11.06.2026

**ಮುಖ್ಯ ವಿಚಾರಣೆಃ ಸಸಅ ರಿಂದ**

ಚಾಸಾ 1 ನನ್ನ ಮಾವ. ಚಾಸಾ 3 ರಿಂದ 6 ರವರ ಪರಿಚಯ ಇರುತ್ತದೆ. ನ್ಯಾಯಾಲಯದ ಮುಂದಿರುವ ಆರೋಪಿತರು ನಮ್ಮ ಸಂಬಂಧಿಕರು. ನನ್ನ ಮತ್ತು ಆರೋಪಿತರ ನಡುವೆ ಯಾವುದೇ ಗಲಾಟೆಯಾಗಿರುವುದಿಲ್ಲ. ಪೊಲೀಸರಿಗೆ ಹೇಳಿಕೆ ನೀಡಿರುವುದಿಲ್ಲ.

(ಈ ಸಂದರ್ಭದಲ್ಲಿ ಸ.ಸ.ಅ. ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿದ್ದು ನೀಡಲಾಯಿತು.)

**ಪಾಟೀ ಸವಾಲುಃ ಸ.ಸ.ಅರವರಿಂದಃ**

ದಿ.20.03.2018 ರಂದು ರಾತ್ರಿ 9 ಕ್ಕೆ ಚಾಸಾ 1 ರವರು ಅಂಗಡಿಯಿಂದ ಬರುತ್ತಿರುವಾಗ ಆರೋಪಿತರು ಚಾಸಾ 1 ರವರನ್ನು ಅಡ್ಡಗಟ್ಟಿ ಅವಾಚ್ಯವಾಗಿ ಬೈದು ನಾವು

ಹಾಕಿದ್ದ ಬಟ್ಟೆಗಳನ್ನು ನಿಮ್ಮ ಕರು ತಿನ್ನುತ್ತಿದೆ ಎಂದು ಬೈಯುತ್ತಾ 1ನೇ ಆರೋಪಿ ಕೈಯಿಂದ ಚಾಸಾ 1 ರವರ ಕಪಾಳಕ್ಕೆ ಹೊಡೆದು 2 ನೇ ಆರೋಪಿಯು ಕಾಲಿನಿಂದ ನನ್ನ ಬಲಭಾಗದ ಪಕ್ಕೆಗೆ ಒದ್ದು ಜುಟ್ಟನ್ನು ಹಿಡಿದು ಎಳೆದಾಡಿ ಕೊಲೆ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಆಗ ಚಾಸಾ 3 ಮತ್ತು 4 ರವರು ಗಲಾಟೆಯನ್ನು ಬಿಡಿಸಿರುತ್ತಾರೆ ಎಂದರೆ ಸರಿಯಲ್ಲ. ನನಗೆ ಚಿಕಿತ್ಸೆ ಪಡೆಯುವಂತಹ ಗಾಯಗಳಾಗಿರುವುದಿಲ್ಲ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ಸಾಕ್ಷಿ ನಿರಾಕರಿಸಿದ ಕಾರಣ ಅದನ್ನು ನಿಪಿ 3 ಎಂದು ಗುರುತಿಸಲಾಯಿತು.

ಆರೋಪಿತರೊಂದಿಗೆ ರಾಜಿ ಮಾಡಿಕೊಂಡಿರುತ್ತೇನೆ ಎಂದರೆ ಸರಿ. ಆದ ಕಾರಣ ನಿಪಿ 3 ರ ಬಗ್ಗೆ ಮಾಹಿತಿ ಇದ್ದರೂ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಇರುವುದಿಲ್ಲ.**

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಿರುತ್ತೇನೆ.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿರುತ್ತಾರೆ.

(ಸ್ನೇಹ ಎಂ.)
ವ್ಯವಹಾರ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಆಲೂರು.